ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015-16 ದಿನಾಂಕ: 20-01-2016

# ಮಾಧ್ಯಮ ಮುಖ್ಯಸ್ಥರ ಗಮನಕ್ಕೆ

ಫೆಬ್ರವರಿ 13 ರಂದು ನಡೆಯಲಿರುವ ಹೆಬ್ಬಾಳ ವಿಧಾನಸಭಾ ಕ್ಷೇತ್ರ ಉಪ ಚುನಾವಣೆ ಸಂದರ್ಭದಲ್ಲಿ ಮತಗಟ್ಟೆ ಮತ್ತು ಮತ ಎಣಿಕಾ ಕೇಂದ್ರಗಳಿಗೆ ತಮ್ಮ ಮಾಧ್ಯಮದಿಂದ ತೆರಳುವ ಮಾಧ್ಯಮ ಪ್ರತಿನಿಧಿಗಳಿಗೆ ಚುನಾವಣಾ ರಹದಾರಿ ಪತ್ರವನ್ನು ಮುಖ್ಯ ಚುನಾವಣಾಧಿಕಾರಿಗಳ ಕಚೇರಿಯವರು ನೀಡಲಿದ್ದಾರೆ. ಈ ಹಿನ್ನೆಲೆಯಲ್ಲಿ ತಮ್ಮ ಮಾಧ್ಯಮದಿಂದ ಚುನಾವಣಾ ವರದಿಗೆ ಆಗಮಿಸುವ ಮಾಧ್ಯಮ ಪ್ರತಿನಿಧಿಗಳ ವಿವರವನ್ನು ತಮ್ಮ ಸಂಸ್ಥೆಯ ಲೆಟರ್‌ಹೆಡ್‌ನಲ್ಲಿ ನಮೂದಿಸಿ, ಅವರ ಇತ್ತೀಚಿನ ಮೂರು ಭಾವಚಿತ್ರಗಳೊಂದಿಗೆ ಉಪನಿರ್ದೇಶಕರು, ಬೆಂಗಳೂರು ನಗರ ಜಿಲ್ಲೆ, 2ನೇ ಮಹಡಿ ವಾರ್ತಾ ಸೌಧ, ಬೆಂಗಳೂರು ಇವರಿಗೆ ದಿನಾಂಕ 23-01-2016 ರೊಳಗೆ ಸಲ್ಲಿಸಲು ಸೂಚಿಸಲಾಗಿದೆ.

ಉಪ ನಿರ್ದೇಶಕರು, ಬೆಂಗಳೂರು ನಗರ ಜಿಲ್ಲೆ

ಮಮತ

# ಪತ್ರಿಕಾ ಪ್ರಕಟಣೆ

# ಪುಸ್ತಕ ಪ್ರದರ್ಶನ

ಬೆಂಗಳೂರು, ಜನವರಿ 20 ( ಕರ್ನಾಟಕ ವಾರ್ತೆ ) :

ಸಾರ್ವಜನಿಕ ಗ್ರಂಥಾಲಯ ಇಲಾಖೆಯ ವಿವಿಧ ಯೋಜನೆಯಡಿ 2012 ಮತ್ತು 2013 ನೇ ಸಾಲಿಗೆ ಆಯ್ಕೆಯಾದ ಪುಸ್ತಕ ಪ್ರದರ್ಶನವನ್ನು ಫೆಬ್ರವರಿ 10 ರವರೆಗೆ ಬೆಂಗಳೂರು ಪಶ್ಚಿಮ ವಲಯದ ನಗರ ಕೇಂದ್ರ ಗ್ರಂಥಾಲಯ, ಗ್ರಂಥಾಂಗಣದಲ್ಲಿ ಏರ್ಪಡಿಸಲಾಗಿದೆ.

ಬಾಬು/ಕೆಎಂ

## ಮಕ್ಕಳಿಗೆ ಸ್ಪರ್ಧೆಗಳು

ಬೆಂಗಳೂರು, ಜನವರಿ 20 ( ಕರ್ನಾಟಕ ವಾರ್ತೆ ) :

ಬೆಂಗಳೂರು ಬಾಲಭವನವು ಗಣರಾಜ್ಯೋತ್ಸವ ಅಂಗವಾಗಿ ಜನವರಿ 26 ರಂದು ಸ್ಥಳದಲ್ಲೇ ಚಿತ್ರ ಬಿಡಿಸುವ ಚಿತ್ರಕಲಾ ಸ್ಪರ್ಧೆ, ವೇಷಭೂಷಣ ಸ್ಪರ್ಧೆಗಳನ್ನು 5 ರಿಂದ 16 ವರ್ಷದ ಮಕ್ಕಳಿಗೆ ಹಮ್ಮಿಕೊಂಡಿದೆ. ಸ್ಪರ್ಧೆಯಲ್ಲಿ ಭಾಗವಹಿಸಲು ಆಸಕ್ತ ಮಕ್ಕಳು ಜನವರಿ 24 ರ ಒಳಗೆ ವಿವರಗಳನ್ನು ನೋಂದಾಯಿಸಲು ಕೋರಿದೆ. ಹೆಚ್ಚಿನ ವಿವರ ಹಾಗೂ ನೋಂದಣಿಗಾಗಿ ಕಾರ್ಯದರ್ಶಿಗಳ ಕಚೇರಿ, ಬಾಲ ಭವನ ಕಚೇರಿ, ಕಬ್ಬನ್ ಉದ್ಯಾನವನ, ಬೆಂಗಳೂರು ಇಲ್ಲಿ ಖುದ್ದಾಗಿ ಅಥವಾ ದೂರವಾಣಿ ಸಂಖ್ಯೆ 080– 22861423 ಮೂಲಕ ಸಂಪರ್ಕಿಸಲು ಕೋರಿದೆ. ಹೆಚ್ಚಿನ ವಿವರಗಳಿಗೆ ಮಿಂಚಂಚೆ secybalbhavan.bng@gmail.com ಹಾಗೂ ಅಂತರ್ಜಾಲ www.jawaharbalbhavan.com ಸಂಪರ್ಕಿಸಬಹುದು.

ಬಾಬು/ಕೆಎಂ

## PRESS NOTE ON OPERATION SMILE II

**Bangalore, January 20 (Karnataka Information)**

One of the specific issues being given priority since 2015 is that of missing children. Further to the direction of the Supreme Court on Missing Children in the case of the writ petition by Bachapan Bachao Andolan the KSP organized a one month campaign “Operation Smile” in July 2015 to trace children who remain missing since 2011. The impact and success of this operation across the country has resulted in the Supreme Court directing all states to take up another such initiative “Operation Smile II” in January 2016. ***As the name indicates this effort is to ensure children are reunited with families, thus bringing ultimate joy to both.***

The mission is to trace children who still remain missing. Up to 30th November 2015 – Total No. of children missing – 2432, No. of children Traced-1162, No. of children Untraced – 1,269 in Karnataka.

The Unit level campaign will be in coordination with key departments of District Administration, Women and Child Development, Labour, Education,

Health, District Legal Services Authority, RDPR/Urban Administration etc and the child protection systems such as Childine, Child Welfare Committees, District Child Protection Units, NGOs working on the issue of missing, trafficked children, and Child Care Institutions, both government and NGOs.

The program is being monitored by Sri Om Prakash, IPS, Director General and Inspector General of Police, Karnataka.

BABU/KM

## ಟೀಯೆಸ್ಸಾರ್ ಸ್ಮಾರಕ, ಮೊಹರೆ ಹಣಮಂತರಾಯ ಪತ್ರಿಕೋದ್ಯಮ ಪ್ರಶಸ್ತಿಗಳಿಗೆ ನಾಮನಿರ್ದೇಶನ ಆಹ್ವಾನ

ಬೆಂಗಳೂರು, ಜನವರಿ 20 (ಕರ್ನಾಟಕ ವಾರ್ತೆ)

ರಾಜ್ಯ ಸರ್ಕಾರವು ಪ್ರತಿ ವರ್ಷ ನೀಡುವ ಟೀಯೆಸ್ಸಾರ್ ಸ್ಮಾರಕ, ಮೊಹರೆ ಹಣಮಂತರಾಯ ಪತ್ರಿಕೋದ್ಯಮ ಪ್ರಶಸ್ತಿ 2014 ಮತ್ತು 2015ನೇ ಸಾಲಿಗೆ ಸಂಬಂಧಿಸಿದಂತೆ ವಿವಿಧ ಪತ್ರಿಕಾ ಸಂಘಟನೆಗಳು ಹಾಗೂ ಮಾಧ್ಯಮ ಸಂಸ್ಥೆಗಳಿಂದ  ಅರ್ಹ ಪತ್ರಕರ್ತರ ನಾಮನಿರ್ದೇಶನಗಳನ್ನು ಆಹ್ವಾನಿಸಲಾಗಿದೆ.

ಕನ್ನಡ ಪತ್ರಿಕೋದ್ಯಮ ಕ್ಷೇತ್ರಕ್ಕೆ ಹಾಗೂ ಕನ್ನಡ ಭಾಷೆಗೆ ವಿಶಿಷ್ಠ ಕೊಡುಗೆ ನೀಡಿ, ಜೀವಮಾನದ ಸಾಧನೆ ಮಾಡಿದ ಪತ್ರಕರ್ತರಿಗೆ ಟೀಯೆಸ್ಸಾರ್ ಸ್ಮಾರಕ ಪ್ರಶಸ್ತಿಯನ್ನು ನೀಡಲಾಗುತ್ತದೆ. ಕನಿಷ್ಠ ಮೂವತ್ತು ವರ್ಷ ಮುದ್ರಣ ಅಥವಾ ವಿದ್ಯುನ್ಮಾನ ಮಾಧ್ಯಮ ಅಥವಾ ಈ ಎರಡೂ ಮಾಧ್ಯಮಗಳಲ್ಲಿ ಸೇವೆ ಸಲ್ಲಿಸಿದ ಪತ್ರಕರ್ತರನ್ನು ಪ್ರಶಸ್ತಿಗಾಗಿ ಪರಿಗಣಿಸಲಾಗುತ್ತದೆ.

ಕನ್ನಡ ಪ್ರತಿಕೋದ್ಯಮ ಕ್ಷೇತ್ರದಲ್ಲಿ  ಯಾವುದೇ ಕನ್ನಡ ಪತ್ರಿಕೆಯನ್ನು ಅಥವಾ ಪತ್ರಿಕಾ ಸಮೂಹವನ್ನು ಕಟ್ಟಿ ಬೆಳೆಸಿದ ಹಾಗೂ ಪ್ರವೃತ್ತಿಯಲ್ಲಿ ಪತ್ರಕರ್ತರಾಗಿ ವೃತ್ತಿಯಲ್ಲಿ ಪತ್ರಿಕಾ ಸಮೂಹದ ಮಾಲೀಕರಾಗಿ, ಆಡಳಿತಗಾರರಾಗಿ ಕನಿಷ್ಠ 30 ವರ್ಷಗಳ ಅನುಭವ ಹೊಂದಿರುವವರನ್ನು ಪರಿಗಣಿಸಲಾಗುತ್ತದೆ.

ಭಾರತೀಯ ಪತ್ರಿಕಾ ಮಂಡಳಿಯಿಂದ ಛೀಮಾರಿ ಅಥವಾ ದಂಡ ಹಾಕಿಸಿಕೊಂಡಲ್ಲಿ, ಯಾವುದೇ ಕ್ರಿಮಿನಲ್ ಅಪರಾಧದಲ್ಲಿ ಭಾಗಿಯಾಗಿದ್ದಲ್ಲಿ, ಅಂತಹ ಪತ್ರಕರ್ತರನ್ನು ಪ್ರಶಸ್ತಿಗೆ ಪರಿಗಣಿಸಲಾಗುವುದಿಲ್ಲ. ಮರಣೋತ್ತರ ಪ್ರಶಸ್ತಿಗೆ ಅವಕಾಶವಿರುವುದಿಲ್ಲ.

ಈ ಎರಡೂ ಪ್ರಶಸ್ತಿಗಳಿಗೆ ಅರ್ಹ ಪತ್ರಕರ್ತರ ಪರಿಚಯ, ಸಾಧನೆಯ ಮಾಹಿತಿಯನ್ನು ಶಿಫಾರಸ್ಸು ಪತ್ರಗಳನ್ನು ಪತ್ರಿಕಾ ಸಂಘಟನೆಗಳು ಹಾಗೂ ಮಾಧ್ಯಮ ಸಂಸ್ಥೆಗಳು ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ನಂ 17, ಭಗವಾನ್ ಮಹಾವೀರ ರಸ್ತೆ, ವಾರ್ತಾಸೌಧ, ಬೆಂಗಳೂರು–560 001 ಇವರಿಗೆ ಫೆಬ್ರವರಿ 1, 2016 ರೊಳಗಾಗಿ ಕಳುಹಿಸುವಂತೆ ಅಧಿಕೃತ ಪ್ರಕಟಣೆ ತಿಳಿಸಿದೆ.

# ವರ್ಗಾವಣೆ

**ಬೆಂಗಳೂರು, ಜನವರಿ 20 ( ಕರ್ನಾಟಕ ವಾರ್ತೆ ) :**

ಬೆಂಗಳೂರು ಬಿ.ಬಿ.ಎಂ.ಪಿ. ಅಪರ ಆಯುಕ್ತ ಬಿ. ಭೀಮಪ್ಪ ಅವರನ್ನು ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಯ ನಿರ್ದೇಶಕರನ್ನಾಗಿ ವರ್ಗಾಯಿಸಲಾಗಿದೆ. ಪ್ರವಾಸೋದ್ಯಮ ಇಲಾಖೆ ಜಂಟಿ ಆಯುಕ್ತರಾದ ಶ್ರೀ ಅನಿತಾ ಅವರನ್ನು ತುಮಕೂರು ಜಿಲ್ಲೆಯ ಅಪರ ಜಿಲ್ಲಾಧಿಕಾರಿ ಹಾಗೂ ಅಪರ ಜಿಲ್ಲಾ ದಂಡಾಧಿಕಾರಿಯಾಗಿ ವರ್ಗಾಯಿಸಿ ಸರ್ಕಾರ ಆದೇಶ ಹೊರಡಿಸಿದೆ.